**RPAD**

# ಕರ್ನಾಟಕ ಸರ್ಕಾರದ ನಡವಳಿ

**ವಿಷಯ: ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ- ಆದೇಶ.**

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/631/ಗ್ರಾಪಂಕಾ/2016, ದಿನಾಂಕ: 17-10-2016.
2. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/637/2016/ARE-8, ದಿನಾಂಕ 22.06.2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/637/2016/ARE-8, ದಿನಾಂಕ 22.06.2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: Uplok-2/DE/637/2016/ARE-8, ದಿನಾಂಕ 23.06.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

> "That DGO while discharging his duties as Secretary in Budanahatti Gram Panchayath had violated the procedure and rules by releasing the amount of Rs.30,000/- under Ambedkar Vasathi Yojane, Rs.30,000/- under Ashraya Yojane without taking photographs stage wise by conducting spot inspection and thereby DGO have failed to maintain absolute integrity and devotion to duty, the act of which is unbecoming of public/Government Servant and thereby DGO have committed misconduct as enumerated under Rule 3(1)(i) (ii) and (iii) of Karnataka Civil Services (Conduct) Rules, 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ರವರು ಮೃತ ಪಟ್ಟಿರುವುದಾಗಿ ವರದಿ ನೀಡಿರುತ್ತಾರೆಂದು ಅಪರ ನಿಬಂಧಕರು, ವಿಚಾರಣೆಗಳು-8 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ಪತ್ರದಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-8 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ರವರು ದಿನಾಂಕ: 31-05-2017 ಮೃತಪಟ್ಟಿರುವುದರಿಂದ ಸದರಿಯವರ

ವಿರುದ್ಧದ ವಿಚಾರಣೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 551 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 21-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ರವರು ದಿನಾಂಕ:31-05-2017 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ (ದಿವಂಗತ ಶ್ರೀ ತಿಪ್ಪೇಸ್ವಾಮಿ, ಗ್ರೇಡ್-1 ಕಾರ್ಯದರ್ಶಿ, ತುರುವನೂರು ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ ರವರ ಕುಟುಂಬದವರಿಗೆ ಜಾರಿ ಮಾಡಿ ವರದಿ ನೀಡಲು ತಿಳಿಸಲಾಗಿದೆ)
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.